20.10.2015 TUESDAY
• ಬೆಂಗಳೂರು • ಬೆಳಗಾವಿ • ಶಿವಮೊಗ್ಗ • ಹುಬ್ಬಳ್ಳಿ • ಮಂಗಳೂರು • ಕಲಬುರಗಿ
epaper.kannadaprabha.in www.kannadaprabha.in
kannadaprabhakp @kprabhanews
49 ವರ್ಷ • ಸಂಚಿಕೆ 291 • ಪುಟಗಳು 14+4 • ₹4

ಗಗನ ನೌಕೆ ಜನಕ ಜಾರ್ಜ್ ಮುಲ್ಲರ್ ನಿಧನ

ಕನ್ನಡಪ್ರಭ
ನೇರ.ದಿಟ್ಟ.ನಿರಂತರ

# ಕಸ್ತೂರಿರಂಗನ್ ವರದಿ ಡಿಸೆಂಬರ್‌ನಲ್ಲಿ ಸಭೆ

## ಕೇಂದ್ರ ಪರಿಸರ ಸಚಿವ ಪ್ರಕಾಶ್ ಜಾವ್ಡೇಕರ್ ಹೇಳಿಕೆ

• **ಕನ್ನಡಪ್ರಭವಾರ್ತೆ** ಬೆಂಗಳೂರು

ಕಸ್ತೂರಿ ರಂಗನ್ ವರದಿ ಅನುಷ್ಠಾನ ಸಂಬಂದ ವರ್ಷಾಂತ್ಯದಲ್ಲಿ ಎಲ್ಲಾ ರಾಜ್ಯಗಳ ಮುಖ್ಯಮಂತ್ರಿಗಳ ಸಭೆ ನಡೆಸಿ ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು ಎಂದು ಕೇಂದ್ರ ಪರಿಸರ ಸಚಿವ ಪ್ರಕಾಶ್ ಜಾವ್ಡೇಕರ್ ಹೇಳಿದರು.

ಮರ ವಿಜ್ಞಾನ ಹಾಗೂ ತಂತ್ರಜ್ಞಾನ ಸಂಸ್ಥೆಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿದ ಅವರು, ಕಸ್ತೂರಿ ರಂಗನ್ ವರದಿ ಅನುಷ್ಠಾನ ಕುರಿತು ಈಗಾಗಲೇ ಹಲವಾರು ರಾಜ್ಯಗಳು ತಮ್ಮ ಅಭಿಪ್ರಾಯ ಹಾಗೂ ಸಲಹೆಗಳನ್ನು ನೀಡಿದೆ. ಈ ಬಗ್ಗೆ ಪರಿಶೀಲಿಸಲಾಗುತ್ತಿದ್ದು ಡಿಸೆಂಬರ್ ಅಥವಾ ಜನವರಿಯಲ್ಲಿ ಎಲ್ಲಾ ರಾಜ್ಯಗಳ ಸಭೆ ಕರೆದು ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು ಎಂದರು.

ಕಸ್ತೂರಿ ರಂಗನ್ ವರದಿ ಕುರಿತು ತಮಿಳುನಾಡನ್ನು ಹೊರತು ಪಡಿಸಿ, ಕರ್ನಾಟಕ, ಕೇರಳ ಮಹಾರಾಷ್ಟ್ರ, ಗೋವಾ, ಆಂಧ್ರಪ್ರದೇಶ ರಾಜ್ಯಗಳು ತಮ್ಮ ಅಭಿಪ್ರಾಯ ನೀಡಿದೆ. ಯಾವುದೇ ರಾಜ್ಯಕ್ಕೂ ತೊಂದರೆಯಾಗದಂತೆ, ಸರಿದೂಗಿಸುವಂತಹ ನಿರ್ಧಾರವನ್ನು ಕೇಂದ್ರ ಕೈಗೊಳ್ಳಲಿದೆ. ವರ್ಷಾರಂಭದಲ್ಲಿ ಅನುಷ್ಠಾನ ವರದಿ ಅಂತಿಮಗೊಳಿಸಲಾಗುವುದು ಎಂದು ತಿಳಿಸಿದರು.

**ಘನತ್ಯಾಜ್ಯ ವಿಲೇ ನೀತಿ:** ಘನತ್ಯಾಜ್ಯ ನಿರ್ವಹಣೆ ಸಂಬಂಧ ನೂತನ ನೀತಿಯನ್ನು ಮಕರ ಸಂಕ್ರಮಣದ ಸಂದರ್ಭದಲ್ಲಿ ಜಾರಿಗೊಳಿಸಲು ಉದ್ದೇಶಿಸಲಾಗಿದೆ. ಇದರಲ್ಲಿ ಔಷಧ ತ್ಯಾಜ್ಯ, ಇ-ತ್ಯಾಜ್ಯ, ಪ್ಲಾಸ್ಟಿಕ್ ತ್ಯಾಜ್ಯಗಳ ವಿಲೇವಾರಿ ಸೇರಿದಂತೆ 6 ವಿಧದ ತ್ಯಾಜ್ಯಗಳ ನಿರ್ವಹಣೆಗೆ ಕ್ರಮ ತೆಗೆದುಕೊಳ್ಳುತ್ತೇವೆ ಎಂದರು.

ಯಾವುದೇ ರಾಜ್ಯಗಳಲ್ಲಿ ಕಾನೂನಿಗೆ ವಿರುದ್ಧವಾಗಿ ಅರಣ್ಯ ಪ್ರದೇಶ ಒತ್ತುವರಿ ಮಾಡಿಕೊಂಡಿದ್ದಲ್ಲಿ ಸೂಕ್ತ ಕ್ರಮಕೈಗೊಳ್ಳಬೇಕು.

ದೇಶಾದ್ಯಂತ ಸುಮಾರು ಮೂರನೇ ಒಂದರಷ್ಟು ಅರಣ್ಯ ಭೂಮಿ ಕಡಿಮೆಯಾಗಿದೆ. ಕೇಂದ್ರ ಅರಣ್ಯ ಇಲಾಖೆಯಲ್ಲಿ ₹ 30 ಸಾವಿರ ಕೋಟಿ ರು.ಗಳಿದ್ದು ಇದನ್ನು ಎಲ್ಲಾ ರಾಜ್ಯಗಳಿಗೆ ಅನುದಾನ ರೂಪದಲ್ಲಿ ಹಂಚಲಾಗುತ್ತದೆ. ಮರಗಳು ಕಡಿಮೆ ಇರುವ ಜಾಗದಲ್ಲಿ ಮತ್ತಷ್ಟು ಮರ ಬೆಳೆಸುವುದು ಸೇರಿದಂತೆ ಇನ್ನಿತರ ಅರಣ್ಯೀಕರಣ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ವಿವರಿಸಿದರು.

### ಅಕ್ರಮ ಮರಳುಗಾರಿಕೆ ತಡೆಗೆ ಕ್ರಮ

ಅಕ್ರಮ ಮರಳು ಗಣಿಗಾರಿಕೆ ತಡೆಯಲು ನೂತನ ನೀತಿ ರೂಪಿಸಲಾಗುತ್ತಿದ್ದು, 2016ರಲ್ಲಿ ಜಾರಿಗೊಳಿಸುವ ಸಾಧ್ಯತೆ ಇದೆ ಎಂದು ಕೇಂದ್ರ ಪರಿಸರ ಸಚಿವ ಪ್ರಕಾಶ್ ಜಾವ್ಡೇಕರ್ ಹೇಳಿದ್ದಾರೆ. ಸ್ಯಾಟಲೈಟ್ ಮೂಲಕ ಮರಳು ಇರುವಿಕೆಯ ಪ್ರಮಾಣಗಳನ್ನು ಆಧಾರವಾಗಿಟ್ಟುಕೊಂಡು ಗಣಿಗಾರಿಕೆಗೆ ಅನುಮತಿ ನೀಡಲು ಉದ್ದೇಶಿಸಲಾಗಿದೆ. ಪರವಾನಗಿ ನೀಡುವ ಸಂದರ್ಭದಲ್ಲೂ ಬಾರ್‌ಕೋಡ್ ತಂತ್ರಜ್ಞಾನ ಬಳಕೆಯ ಮೂಲಕ ಅಕ್ರಮ ಮರಳು ಗಣಿಗಾರಿಕೆ ತಡೆಗೆ ಕ್ರಮಕೈಗೊಳ್ಳಲಾಗುವುದು. ಈ ತಂತ್ರಜ್ಞಾನದಿಂದ ಪ್ರಮುಖವಾಗಿ ಒಂದೇ ಪರವಾನಗಿ ಪಡೆದುಕೊಂಡು ಅನೇಕ ಬರಿ ಮರಳು ಸಾಗಾಟ ಮಾಡುವುದು ಹಾಗೂ ಹೆಚ್ಚು ತೂಕದಲ್ಲಿ ಮರಳು ಸಾಗಿಸುವುದನ್ನು ತಪ್ಪಿಸಲಾಗುವುದು ಎಂದು ತಿಳಿಸಿದರು.